# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ ದಿನಾಂಕ:30ನೇ ಜನವರಿ, 2026**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

### 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಭಾರತ ಸಂವಿಧಾನದ 151(2)ನೇ ಅನುಚ್ಛೇಧದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಈ ಕೆಳಕಂಡ ವರದಿಗಳನ್ನು ಮಂಡಿಸುವುದು.

1. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ – ವಾಣಿಜ್ಯ) ವರದಿ (2025ರ ವರದಿ ಸಂಖ್ಯೆ–10)
2. ಸ್ಮಾರ್ಟ್ ಸಿಟಿ ಮಿಷನ್ ಅನುಷ್ಠಾನದ ವರದಿ (ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ–ಸಿವಿಲ್) (2025ರ ವರದಿ ಸಂಖ್ಯೆ–11)

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2026ನೇ ಜನವರಿ 22ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:27.01.2026ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

**ಎರಡನೇ ದಿನ**

## 03. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 2ನೇ ಪಟ್ಟಿಯಿಂದ ತಡೆಹಿಡಿಯಲಾದ<br>**ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರ<br>ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 23(170) | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 04. ಶೂನ್ಯವೇಳೆ ಪ್ರಸ್ತಾವಗಳು

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಎಸ್. ರವಿ ಹಾಗೂ ಎಂ.ಎಲ್. ಅನಿಲ್ ಕುಮಾರ್** ಅವರುಗಳು ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿ ನೇಮಕ ಆದೇಶವನ್ನು ಹಿಂಪಡೆದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರ ಪ್ರಕರಣ 8(1)ಬಿ (i) ರನ್ವಯ ಈಗಿರುವ ಸದಸ್ಯರನ್ನೊಳಗೊಂಡ ಆಡಳಿತ ಸಮಿತಿಯ ಅವಧಿಯನ್ನು 6 ತಿಂಗಳಿಗೆ ವಿಸ್ತರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02. **ಶ್ರೀ ಬಸನಗೌಡ ಬಾದರ್ಲಿ** ಅವರು ಹಟ್ಟಿ ಚಿನ್ನದ ಗಣಿ ಕಂಪನಿಯು ತನ್ನ ಅವೈಜ್ಞಾನಿಕ ಉತ್ಪಾದನೆಯಿಂದಾಗಿ ಡಿಸೆಂಬರ್-2025 ಅಂತ್ಯಕ್ಕೆ ನಿಗದಿತ ಗುರಿಗಿಂತ ಸುಮಾರು 285 ಕೆ.ಜಿ. ಕಡಿಮೆ ಚಿನ್ನವನ್ನು ಹಾಗೂ ಸುಮಾರು 1.31 ಲಕ್ಷ ಟನ್ ಕಡಿಮೆ ಅದಿರನ್ನು ಉತ್ಪಾದಿಸಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

03. **ಶ್ರೀ ಶಿವಕುಮಾರ್ ಕೆ.** ಅವರು ಬೆಂಗಳೂರು ಕೊಳಚೆ ನೀರನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಮೂಲಕ ಸಂಸ್ಕರಿಸಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳನ್ನು ತುಂಬಿಸುವ ಕೆ.ಸಿ. ವ್ಯಾಲಿ ಯೋಜನೆ ಬಗ್ಗೆ ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

04. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಕುದುರೆ ಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು ಬೇರೆಡೆ ಸ್ಥಳಾಂತರಿಸುವುದರಿಂದ, ಕುಟುಂಬಗಳಿಗೆ ನೀಡುವ ಪರ್ಯಾಯ ಜಮೀನು ಅಥವಾ ಪರಿಹಾರ ಮತ್ತು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

..3..

೦೫. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟಿ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ದುರಸ್ಥಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೬. **ಶ್ರೀ ಐವನ್ ಡಿ'ಸೋಜಾ** ಅವರು ಕರಾವಳಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಿ, ಉದ್ಯೋಗವನ್ನು ಒದಗಿಸುವ ನಿಟ್ಟಿನಲ್ಲಿ ಪ್ರತ್ಯೇಕವಾದ ಪ್ರವಾಸೋದ್ಯಮ ನೀತಿಯನ್ನು ಸ್ಥಾಪಿಸುವುದು ಮತ್ತು ಸಿ ಆರ್ ಜೆಡ್ ತೊಂದರೆಗಳನ್ನು ಸರಳೀಕರಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕಾರದ ಶ್ರೀ ಎನ್. ರವಿಕುಮಾರ್, ಶ್ರೀ ಶರವಣ ಟಿ.ಎ, ಶ್ರೀ ಶಶೀಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಇತರರು** ಅಬಕಾರಿ ಇಲಾಖೆಯಲ್ಲಿ ಸಿಎಲ್-2, ಸಿಎಲ್-7 ಮತ್ತು ಸಿಎಲ್-9ಗಳಿಗೆ ನಿಯಮಾನುಸಾರ ಪರವಾನಗಿ ನೀಡುವ ಬದಲು ದರಪಟ್ಟಿಯನ್ನು ನಿಗದಿಪಡಿಸುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಹಾಗೂ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಕುರಿತು **ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.** (ಮಾನ್ಯ ಅಬಕಾರಿ ಸಚಿವರು)

೦2. **ಶ್ರೀ ರಮೇಶ್ ಬಾಬು** ಅವರು ರಾಜ್ಯದಲ್ಲಿ ಬಹುತೇಕ ಕೈಗಾರಿಕೆಗಳು ಹಾಗೂ ಕಂಪನಿಗಳು ತಮ್ಮ ಲಾಭಾಂಶದಲ್ಲಿ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್ಆರ್) ನಿಧಿಯನ್ನು ರಾಜ್ಯದ ಮೂಲಭೂತ ಸೌಕರ್ಯಗಳಿಗೆ ನೀಡದೆ ವಂಚಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)

೦3. **ಶ್ರೀಯುತರುಗಳಾದ ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.), ಬಸನಗೌಡ ಬಾದರ್ಲಿ, ಬಲ್ಕೀಸ್ ಬಾನು ಹಾಗೂ ರಾಮೋಜಿಗೌಡ** ಅವರುಗಳು ದಿನಾಂಕ:15.10.2022 ರಂದು ಪೊಲೀಸ್ ಇನ್ಸ್‌ಪೆಕ್ಟರ್ (ಐ.ಎಸ್.ಡಿ) ಅವರನ್ನು ಅಮಾನತ್ತುಗೊಳಿಸಿ ಹೊರಡಿಸಲಾದ ಆದೇಶವನ್ನು ತೆರವುಗೊಳಿಸಿ ಸದರಿ ಅಧಿಕಾರಿಯನ್ನು ಸ್ಥಳ ನಿಯುಕ್ತಿಗೊಳಿಸುವಂತೆ ಕರ್ನಾಟಕ ಉಚ್ಚ ನ್ಯಾಯಾಲಯವು ಆದೇಶ ನೀಡಿದ್ದರೂ ಇದುವರೆವಿಗೂ ಕ್ರಮ ವಹಿಸದಿರುವ ಬಗ್ಗೆ ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

೦4. **ಡಾ: ತಳವಾರ್ ಸಾಬಣ್ಣ** ಅವರು ಗಡಿನಾಡು ಮತ್ತು ಹೊರನಾಡು ಕನ್ನಡಿಗರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಮತ್ತು ಉದ್ಯೋಗ ಅವಕಾಶ ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)

..4..

೦೫. **ಶ್ರೀ ಕೆ.ಎಸ್. ನವೀನ್** ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆಯನ್ನು ಹೆಚ್ಚಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

೦೬. **ಶ್ರೀಮತಿ ಭಾರತಿ ಶೆಟ್ಟಿ** ಅವರು ರಾಜ್ಯದಲ್ಲಿ ಮಂಗಳಮುಖಿಯರು ಸಮಾಜದ ಮುಖ್ಯ ವಾಹಿನಿಯಲ್ಲಿ ಶೋಷಣೆಗಳಿಗೆ ಒಳಪಡುತ್ತಿರುವುದರಿಂದ ಅವರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು ಮತ್ತು ಸದರಿಯವರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಪ್ರತ್ಯೇಕ ನಿರ್ದೇಶನಾಲಯವನ್ನು ಹಾಗೂ ಗೃಹ ಇಲಾಖೆಯಲ್ಲಿ ಪ್ರತ್ಯೇಕ ಸೆಲ್‌ನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**